## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪಿ.ಕೆ.ಎಂ ಎಜುಕೇಷನ್ ಟ್ರಸ್ಟ್ (ರಿ) ಇವರಿಗೆ ಆರ್ ಆರ್ ಕಾಲೇಜ್ ಆಫ್ ಫಾರ್ಮಸಿ, ಎಂಬ ಹೆಸರಿನಲ್ಲಿ ಬೆಂಗಳೂರಿನಲ್ಲಿ ಹೊಸದಾಗಿ ಎಂ-ಫಾರ್ಮ (ಫಾರ್ಮಕಾಲಜಿ) ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:**
1. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪತ್ರ ಸಂಖ್ಯೆ: ACA/AFF/F-PH-61/2021-22,ದಿನಾಂಕ:28.12.2020
2. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ ಇವರ ವರದಿ ಸಂಖ್ಯೆ:ಔನಿಇ/83/ಯೋಜನೆ/2020-21, ದಿನಾಂಕ:16.09.2021 ಮತ್ತು 10.08.2022.
3. ಉನ್ನತಾಧಿಕಾರಿ ಸಮಿತಿ ಸಭೆಯ ನಡವಳಿ ದಿನಾಂಕ: 04.08.2022.

* * * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ.(1)ರ ಪತ್ರದಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು 2021-22ನೇ ಶೈಕ್ಷಣಿಕ ಸಾಲಿನಿಂದ ಪಿ.ಕೆ.ಎಂ ಎಜುಕೇಷನ್ & ಟ್ರಸ್ಟ್ (ರಿ) ಇವರ ಆರ್ ಆರ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು, ಇಲ್ಲಿ 15 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಎಂ-ಫಾರ್ಮ (ಫಾರ್ಮಕಾಲಜಿ) ಕೋರ್ಸ್‌ನ್ನು ಪ್ರಾರಂಭಿಸಲು ಶಿಫಾರಸ್ಸು ಮಾಡಿರುತ್ತದೆ.

ಮೇಲೆ ಓದಲಾದ ಕ್ರ.ಸಂ.(2)ರ ಪತ್ರಗಳಲ್ಲಿ ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಇವರ ತನಿಖಾ ತಂಡದ ತನಿಖಾ ವರದಿಯನ್ವಯ ಪಿ.ಕೆ.ಎಂ ಎಜುಕೇಷನ್ ಟ್ರಸ್ಟ್ (ರಿ) ಇವರ ಆರ್ ಆರ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇಲ್ಲಿ 2021-22ನೇ ಸಾಲಿನಿಂದ RGUHS ಮತ್ತು ಭಾರತೀಯ ಫಾರ್ಮಸಿ ಪರಿಷತ್ತಿನ ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು15 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಎಂ-ಫಾರ್ಮ (ಫಾರ್ಮಕಾಲಜಿ) ಕೋರ್ಸ್‌ನ್ನು ಪ್ರಾರಂಭಿಸಲು ನಿರಾಕ್ಷೇಪಣಾ ಪತ್ರ ನೀಡಬಹುದಾಗಿದೆ ಎಂದು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ(3)ರ ದಿನಾಂಕ: 04.08.2022ರಂದು ನಡೆದ ಉನ್ನತಾಧಿಕಾರಿ ಸಮಿತಿ ಸಭೆಯಲ್ಲಿ ಪಿ.ಕೆ.ಎಂ ಎಜುಕೇಷನ್ ಟ್ರಸ್ಟ್ (ರಿ) ಇವರ ಆರ್ ಆರ್ ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಇಲ್ಲಿ 2022-23ನೇ ಶೈಕ್ಷಣಿಕ ಸಾಲಿನಿಂದ 15 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಎಂ-ಫಾರ್ಮ (ಫಾರ್ಮಕಾಲಜಿ) ಕೋರ್ಸ್‌ನ್ನು ಪ್ರಾರಂಭಿಸಲು ನಿರಾಕ್ಷೇಪಣಾ ಪತ್ರ ನೀಡಲು ಶಿಫಾರಸ್ಸು ಮಾಡಲಾಗಿದೆ.

RGUHS ಹಾಗೂ ಔಷಧ ನಿಯಂತ್ರಕರ ವರದಿ ಹಾಗೂ ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು, ಪಿ.ಕೆ.ಎಂ ಎಜುಕೇಷನ್ ಟ್ರಸ್ಟ್ (ರಿ) ಇವರ ಆರ್.ಆರ್.ಕಾಲೇಜ್ ಆಫ್ ಫಾರ್ಮಸಿ, ಬೆಂಗಳೂರು ಹೆಸರಿನಲ್ಲಿ 2022-23ನೇ ಸಾಲಿನಿಂದ

ಅನ್ವಯಿಸುವಂತೆ 15 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಎಂ-ಫಾರ್ಮ್ (ಫಾರ್ಮಕಾಲಜಿ) ಕೋರ್ಸ್‌ನ್ನು ಪ್ರಾರಂಭಿಸಲು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಆಕುಕ 08 ಪಿಟಿಡಿ 2021,**
**ಬೆಂಗಳೂರು.ದಿನಾಂಕ:16.12.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಪಿ.ಕೆ.ಎಂ ಎಜುಕೇಷನ್ & ಟ್ರಸ್ಟ್ (ರಿ) ಇವರ ಆರ್. ಆರ್. ಕಾಲೇಜ್ ಆಫ್ ಫಾರ್ಮಸಿ, ಆರ್.ಆರ್. ಲೇಯ್‌ಔಟ್, ಚಿಕ್ಕಬಾಣಾವರ ರೈಲ್ವೇ ಸ್ಟೇಷನ್ ಹತ್ತಿರ, ಚಿಕ್ಕ ಬಾಣಾವರ, ಹೆಸರಘಟ್ಟ, ಬೆಂಗಳೂರು-560090 ಇಲ್ಲಿ 2022-23ನೇ ಶೈಕ್ಷಣಿಕ ಸಾಲಿನಿಂದ ಅನ್ವಯಿಸುವಂತೆ 15 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಎಂ-ಫಾರ್ಮ್ (ಫಾರ್ಮಕಾಲಜಿ) ಕೋರ್ಸ್‌ನ್ನು ಪ್ರಾರಂಭಿಸಲು ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ಅನುಮತಿ ನೀಡಿದೆ.

**ಸದರಿ ಸಂಸ್ಥೆಯು ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು:-**

1. ಎಂ-ಫಾರ್ಮ್ (ಫಾರ್ಮಕಾಲಜಿ) ಕೋರ್ಸ್‌ನ ಸೀಟುಗಳನ್ನು ಹೆಚ್ಚಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
2. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು ಮತ್ತು ಸರ್ಕಾರಿ ಕೋಟಾ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
3. RGUHS ಮತ್ತು PCI ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
5. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
6. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ, ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
7. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
8. ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಇವರು, ಖಚಿತಪಡಿಸಿಕೊಳ್ಳುವುದು.
9. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

SR Gorwar 16/12/2022

**(ಶೈಲಾ ಆರ್. ಗೊರವರ )**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಭಾವೈಪ ಮತ್ತು ಸಮನ್ವಯ)

**ಇವರಿಗೆ:-**

1. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಬ್ಲಾಕ್, ಜಯನಗರ, ಬೆಂಗಳೂರು-41.

3. ಪ್ರಾಂಶುಪಾಲರು, ಸರ್ಕಾರಿ ವಿಜ್ಞಾನ ಔಷಧ ಮಹಾವಿದ್ಯಾಲಯ, ಪಿ.ಕಾಳಿಂಗ್ ರಾವ್ ರಸ್ತೆ, ಬೆಂಗಳೂರು.
4. ಪ್ರಾಂಶುಪಾಲರು, ಆರ್. ಆರ್. ಕಾಲೇಜ್ ಆಫ್ ಫಾರ್ಮಸಿ, ಆರ್.ಆರ್. ಲೇಔಟ್, ಚಿಕ್ಕಬಾಣಾವರ ರೈಲ್ವೇ ಸ್ಟೇಷನ್ ಹತ್ತಿರ, ಚಿಕ್ಕ ಬಾಣಾವರ, ಹೆಸರಘಟ್ಟ, ಬೆಂಗಳೂರು-560090.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

__ಪ್ರತಿ ಮಾಹಿತಿಗಾಗಿ:-__

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ, ವಿಕಾಸ ಸೌಧ, ಬೆಂಗಳೂರು.